ಜೆಎಸ್‌ಎಸ್ ಮಹಾವಿದ್ಯಾಪೀಠ
ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–44

ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**4 ಅಕ್ಟೋಬರ್ 2021 * ಸೋಮವಾರ * ಸಂಜೆ 6.00**

ದಿವ್ಯ ಸಾನ್ನಿಧ್ಯ

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

ಉಪನ್ಯಾಸ



**ಡಾ. ಸಿ. ಸೋಮಶೇಖರ್,** ಐಎಎಸ್(ನಿ)
ಅಧ್ಯಕ್ಷರು
ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ

ವಿಷಯ: ಆಡಳಿತಗಾರರು–ಶರಣ ಸಂದೇಶ

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

LIVE STREAMING

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಡಾ. ಸಿ. ಸೋಮಶೇಖರ್‌ರವರು** ನಿವೃತ್ತ ಐಎಎಸ್ ಅಧಿಕಾರಿಗಳು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಅವರ ಜನ್ಮಸ್ಥಳ. ಬಾಲ್ಯದಿಂದಲೇ ಬಹುಮುಖ ಪ್ರತಿಭೆಯುಳ್ಳವರು, ವಿದ್ಯಾರ್ಥಿ ದೆಸೆಯಿಂದ ಸೃಜನಶೀಲ ವ್ಯಕ್ತಿತ್ವವನ್ನು ಮೈಗೂಡಿಸಿಕೊಂಡವರು. ಬೆಂಗಳೂರು ವಿಶ್ವವಿದ್ಯಾಲಯದಿಂದ ಎಂಕಾಂ ಪದವಿ ಹಾಗೂ ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಡಿಲಿಟ್ ಪದವಿ ಪಡೆದಿರುವರು.

ಬೆಂಗಳೂರಿನ ಕೆಎಲ್‌ಇ ಎಸ್. ನಿಜಲಿಂಗಪ್ಪ ಕಾಲೇಜಿನಲ್ಲಿ ಉಪನ್ಯಾಸಕರಾಗಿ ವೃತ್ತಿ ಆರಂಭಿಸಿದರು. 1982ರಲ್ಲಿ ಅಸಿಸ್ಟೆಂಟ್ ಕಮಿಷನರ್ ಆಗಿ ಆಯ್ಕೆಯಾಗಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸಿ ಐಎಎಸ್ ಅಧಿಕಾರಿಗಳಾಗಿ ಪದೋನ್ನತಿ ಹೊಂದಿ ಸಹಕಾರ ಇಲಾಖೆಯ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದರು. ಪ್ರಸ್ತುತ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿದ್ದಾರೆ.

ಉತ್ತಮ ವಾಗ್ಮಿಗಳು ಹಾಗೂ ಬರಹಗಾರರು. ಶರಣ ಸಂಸ್ಕೃತಿ ಮತ್ತು ಸಾಹಿತ್ಯದ ಬಗ್ಗೆ ಅಪಾರ ಆಸಕ್ತಿಯುಳ್ಳವರು. ವಚನಗಳಲ್ಲಿ ಸಾಮಾಜಿಕ ಚಿಂತನೆ, ಚಿಂತನ ಚಿಲುಮೆ, ಚಿಂತನ ಕಿರಣ ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ ವಿದ್ವತ್‌ಪೂರ್ಣ ಉಪನ್ಯಾಸಗಳನ್ನು ಮಂಡಿಸಿದ್ದಾರೆ. ಬಸವ ವೇದಿಕೆ ಮತ್ತು ಡಾ. ಸಿ. ಸೋಮಶೇಖರ್ ಮತ್ತು ಶ್ರೀಮತಿ ಎನ್. ಸರ್ವಮಂಗಳ ಸಾಹಿತ್ಯ ಸೇವಾ ಪ್ರತಿಷ್ಠಾನವನ್ನು ಸ್ಥಾಪಿಸಿ ಅವುಗಳ ಮೂಲಕ ಹಲವಾರು ಸಾಮಾಜಿಕ, ಸಾಹಿತ್ಯಕ, ಸಾಂಸ್ಕೃತಿಕ ಕಾರ್ಯಗಳನ್ನು ನೆರವೇರಿಸುತ್ತಿದ್ದಾರೆ.

ಇವರ ಸೇವೆಯನ್ನು ಗುರುತಿಸಿ ಪಿಆರ್‌ಸಿಐ ಚಾಣಕ್ಯ ಪ್ರಶಸ್ತಿ–2014, ಉದಯಭಾನು ಸುವರ್ಣ ರತ್ನ ಪ್ರಶಸ್ತಿ, ರಾಷ್ಟ್ರೀಯ ಕಲಾ ಪೋಷಕ ಪ್ರಶಸ್ತಿ, ಆರ್ಯಭಟ ಪ್ರಶಸ್ತಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಮತ್ತು ರಮಣಶ್ರೀ ಸಂಸ್ಥೆಯಿಂದ ಜೀವಮಾನ ಸಾಧನೆ ಪ್ರಶಸ್ತಿ ಸೇರಿದಂತೆ ಹಲವಾರು ಸಂಘ–ಸಂಸ್ಥೆಗಳು ಪ್ರಶಸ್ತಿ ಪುರಸ್ಕಾರಗಳನ್ನು ನೀಡಿ ಗೌರವಿಸಿವೆ.

**ಜ್ಞಾನವಾರಿಧಿ–45 * 11 ಅಕ್ಟೋಬರ್ 2021**

**ಶ್ರೀ ಸಿ.ಸಿ. ಪಾವಟೆ**

ಆಪ್ತ ಸಮಾಲೋಚಕರು ಹಾಗೂ
ತರಬೇತುದಾರರು

**ವಿಷಯ:** ಮಾನವನಲ್ಲಿರುವ ಅದ್ಭುತ ಶಕ್ತಿಯ ಅರಿವು

**ಜ್ಞಾನವಾರಿಧಿ–46 * 18 ಅಕ್ಟೋಬರ್ 2021**

**ಡಾ. ಎ.ಎಸ್. ಚಂದ್ರಶೇಖರ**

ಖ್ಯಾತ ವೈದ್ಯರು
ಮೈಸೂರು

**ವಿಷಯ:** ಮನೆಮದ್ದು